ಅ) ಡಾ॥ ನಂಜುಂಡಪ್ಪ ರವರ ವರದಿಯನ್ವಯ ಉತ್ತರ ಕರ್ನಾಟಕ ಭಾಗವಾದ ಬಿಜಾಪುರ ಜಿಲ್ಲೆಯು ಮುದ್ದೇಬಿಹಾಳ ತಾಲ್ಲೂಕು ಪ್ರಾದೇಶಿಕ ಅಸಮತೋಲನೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಮುದ್ದೇಬಿಹಾಳ ತಾಲ್ಲೂಕು ತಾಳಿಕೋಟೆಗೆ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡುವ ಕುರಿತು ಪ್ರಸ್ತಾವನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಐತಿಹಾಸಿಕ ಕೇಂದ್ರವಾದ ತಾಳಿಕೋಟೆ ಪಟ್ಟಣಕ್ಕೆ ಒಂದು ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡಲು ಸರ್ಕಾರಕ್ಕಿರುವ ಅಡೆತಡೆಗಳು ಏನು;

ಈ) ಪದವಿ ಪೂರ್ವ ಕಾಲೇಜನ್ನು ಯಾವಾಗ ಮಂಜೂರು ಮಾಡಲಾಗುವುದು. (ವಿವರ ನೀಡುವುದು)?

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಬಂದಿದೆ.

ಆ) ಹೌದು.

ಇ, ಈ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಮಂಜೂರಾತಿಯು ನಿರಂತರ ಪ್ರಕ್ರಿಯೆಯಾಗಿದ್ದು, ಹತ್ತಿರದಲ್ಲಿರುವ ಸರ್ಕಾರಿ, ಖಾಸಗಿ ಅನುದಾನಿತ/ಅನುದಾನರಹಿತ ಪದವಿ ಪೂರ್ವ ಪ್ರೌಢಶಾಲೆಗಳ ಸಂಖ್ಯೆ, ಅವುಗಳಲ್ಲಿ ಲಭ್ಯವಾಗುವ ವಿದ್ಯಾರ್ಥಿಗಳ ಸಂಖ್ಯೆ, ಶೈಕ್ಷಣಿಕ ಅಗತ್ಯತೆ, ಆಯವ್ಯಯದಲ್ಲಿನ ಸಂಪನ್ಮೂಲದ ಲಭ್ಯತೆ, ಅಗತ್ಯ ಮೂಲಭೂತ ಸೌಲಭ್ಯಗಳ ಲಭ್ಯತೆ ಹಾಗೂ ಡಾ॥ ನಂಜುಂಡಪ್ಪನವರ ವರದಿಯನ್ವಯ ಹಂತಹಂತವಾಗಿ ಮಂಜೂರು ಮಾಡಲಾಗುತ್ತಿದೆ.

507 (690) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಾ॥ ನಂಜುಂಡಪ್ಪ ವರದಿಯಲ್ಲಿ ತಿಳಿಸಿರುವಂತೆ ಉತ್ತರ ಕರ್ನಾಟಕದ ಭಾಗದಲ್ಲಿ ಉಂಟಾಗಿರುವ ಪ್ರಾದೇಶಿಕ ಅಸಮತೋಲನ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಪ್ರಾದೇಶಿಕ ಅಸಮತೋಲನೆಯನ್ನು ಸರಿಪಡಿಸಲು ಸರ್ಕಾರವು ಕೈಗೊಂಡ ಕ್ರಮವೇನು;

ಇ) ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕು ತಾಳಿಕೋಟೆ ವಿಭಾಗದಲ್ಲಿ ಸರ್ಕಾರಿ ಪದವಿ ಕಾಲೇಜು ಇಲ್ಲದೇ ಗ್ರಾಮೀಣ ವಿದ್ಯಾರ್ಥಿಗಳು ತೀವ್ರ ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಇದುವರೆವಿಗೆ ಈ ವಿಭಾಗಕ್ಕೆ ಒಂದು ಸರ್ಕಾರಿ ಪದವಿ ಕಾಲೇಜನ್ನು ಮಂಜೂರು ಮಾಡದಿರಲು ಕಾರಣಗಳೇನು?

ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಹೊಸ ಸರ್ಕಾರಿ ಪದವಿ ಕಾಲೇಜುಗಳನ್ನು ಪ್ರಾರಂಭಿಸುವಾಗ ಈ ಪ್ರದೇಶಗಳಲ್ಲಿ ಹೆಚ್ಚು ಕಾಲೇಜುಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.

2007–08ನೇ ಸಾಲಿನಲ್ಲಿ ಈವರೆಗೆ ಪ್ರಾರಂಭಿಸಲಾಗಿರುವ 104 ಸರ್ಕಾರಿ ಪದವಿ ಕಾಲೇಜುಗಳಲ್ಲಿ 48 ಕಾಲೇಜುಗಳನ್ನು ಉತ್ತರ ಕರ್ನಾಟಕ ಭಾಗದಲ್ಲಿ ತೆರೆಯಲಾಗಿದೆ.

ಇ) ಇಲ್ಲ.

ಈ) ತಾಳಿಕೋಟೆ ವಿಭಾಗದಲ್ಲಿ ಸರ್ಕಾರಿ ಪದವಿ ಕಾಲೇಜನ್ನು ಪ್ರಾರಂಭಿಸಲು ಯಾವುದೇ ಬೇಡಿಕೆ ಇಲಾಖೆಯಲ್ಲಿ ಸ್ವೀಕೃತವಾಗಿಲ್ಲ. ತಾಲ್ಲೂಕು ಕೇಂದ್ರವಾದ ಮುದ್ದೇಬಿಹಾಳದಲ್ಲಿ 2007–08ನೇ ಸಾಲಿನಿಂದ ಕಲಾ ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳುಳ್ಳ ಸರ್ಕಾರಿ ಪದವಿ ಕಾಲೇಜನ್ನು ಪ್ರಾರಂಭಿಸಲಾಗಿದೆ.

510 (471) ಶ್ರೀ ಬಾದರ್ಲಿ ಹಂಪನಗೌಡ (ಸಿಂಧನೂರು) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕೇಂದ್ರ ಸರ್ಕಾರ ರಾಜ್ಯದ ಅಲ್ಪಸಂಖ್ಯಾತೆ ಜನತೆಗೆ ಶಿಕ್ಷಣ ಇಲಾಖೆಯ ಮುಖಾಂತೆ ಘೋಷಣೆ ಮಾಡಿರುವ 15 ಅಂಶಗಳ ಕಾರ್ಯಕ್ರಮಗಳಡಿಯಲ್ಲಿ ಹಮ್ಮಿಕೊಂಡಿರುವ ಯೋಜನೆಗಳಾವುವು?;

2) ಇದ್ದಲ್ಲಿ ಯಾವ ವರ್ಷದಿಂದ ಈ ಯೋಜನೆಗಳನ್ನು ಪ್ರಾರಂಭಿಸಲಾಯಿತು; ಈ ಯೋಜನೆಗೆ ನಿಗದಿಪಡಿಸಿದ ಅನುದಾನದ ಮೊತ್ತವೆಷ್ಟು?